# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೬
http://www.kasapa.in e-mail : kannadaparishattu@gmail.com


---

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೨–೨೩ ದಿನಾಂಕ : ೨೦-೧೦-೨೦೨೨

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

...............................................ಬೆಂಗಳೂರು

## ಮಾಧ್ಯಮ ಆಹ್ವಾನ

ಕನ್ನಡ ಸಾಹಿತ್ಯ ಪರಿಷತ್ತು **'ಚಾವುಂಡರಾಯ ದತ್ತಿ', 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ'** ಹಾಗೂ **'ಕನ್ನಡ ಕಾಯಕ ದತ್ತಿ'** ಪ್ರಶಸ್ತಿ ಪ್ರದಾನ ಸಮಾರಂಭವನ್ನು ಅಕ್ಟೋಬರ್ ೨೧ ಶುಕ್ರವಾರ ಸಂಜೆ ೪.೩೦ಕ್ಕೆ ಚಾಮರಾಜ ಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು **ಹಿರಿಯ ವಿದ್ವಾಂಸರಾದ ನಾಡೋಜ ಡಾ. ಹಂಪ ನಾಗರಾಜಯ್ಯ** ಅವರು ನೆರವೇರಿಸಲಿದ್ದಾರೆ. **ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ವಹಿಸಲಿದ್ದಾರೆ. ಸರ್ವೋಚ್ಚನ್ಯಾಯಾಲಯದ **ವಿಶ್ರಾಂತ ನ್ಯಾಯಮೂರ್ತಿಗಳು ಹಾಗೂ ವಿಶ್ರಾಂತ** ಲೋಕಾಯುಕ್ತರು ಆಗಿರುವ ನ್ಯಾಯಮೂರ್ತಿ ಶ್ರೀ ಸಂತೋಷ ಹೆಗ್ಡೆ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

**ಧಾರವಾಡ ವಿಶ್ರಾಂತ ಕನ್ನಡ ಪ್ರಾಧ್ಯಾಪಕರು ಹಾಗೂ ವಿಶ್ರಾಂತ ಕುಲ ಸಚಿವರಾದ ಪ್ರೊ. ಶಾಂತಿನಾಥ ದಿಬ್ಬದ** ಅವರು **'ಚಾವುಂಡರಾಯ ದತ್ತಿ'** ಪ್ರಶಸ್ತಿಗೆ, **ವಿಜಯವಾಣಿ ದಿನಪತ್ರಿಕೆಯ ಸಂಪಾದಕರಾದ ಶ್ರೀ ಕೆ.ಎನ್.ಚನ್ನೇಗೌಡ** ಅವರು **'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ'** ಪ್ರಶಸ್ತಿಗೆ ಭಾಜನರಾಗಿದ್ದು, **'ಕನ್ನಡ ಕಾಯಕ ದತ್ತಿ'** ಪ್ರಶಸ್ತಿಯನ್ನು ಮಹಾರಾಷ್ಟ್ರ ರಾಜ್ಯದ ಗಡಿ ಭಾಗವಾದ ಸೊಲ್ಲಾಪುರ ಜಿಲ್ಲೆಯ ಅಕ್ಕಲಕೋಟೆ ತಾಲೂಕಿನ ಪಿಠಾಧ್ಯಕ್ಷರಾದ ಪರಮಪೂಜ್ಯ **ಶ್ರೀಮನ್ ನಿರಂಜನ ಪ್ರಣವ ಸ್ವರೂಪಿ ಬಸವಲಿಂಗ ಮಹಾಸ್ವಾಮಿಗಳು**, ಕೋಲಾರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ **ಡಾ. ಶಂಕರಪ್ಪ** ಮತ್ತು ಕೊಪ್ಪಳದ ರಂಗನಿರ್ದೇಶಕರು ಹಾಗೂ ರಂಗಭೂಮಿ ಕಲಾವಿದರಾದ **ಶ್ರೀ. ಕೆ. ಇಮಾಮಸಾಬ** ಅವರಿಗೆ ದತ್ತಿ ಪ್ರಶಸ್ತಿ ಪ್ರದಾನಮಾಡಲಾಗುವುದು.

ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿರುವ **'ಚಾವುಂಡರಾಯ ದತ್ತಿ', 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ'** ಹಾಗೂ **'ಕನ್ನಡ ಕಾಯಕ ದತ್ತಿ'** ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಮಾಧ್ಯಮ ಪ್ರತಿನಿಧಿಗಳಿಗೆ, ಛಾಯಾಚಿತ್ರಗ್ರಾಹಕರಿಗೆ **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಆದರದ ಆಮಂತ್ರಣ ನೀಡಿದ್ದಾರೆ.

**ಎಲ್ಲರ ಸಮಯಕ್ಕೆ ಗೌರವ ಕೊಟ್ಟು ನಿಗದಿತ ಸಮಯಕ್ಕೆ ಕಾರ್ಯಕ್ರಮ ಆರಂಭವಾಗಲಿದೆ. ತಮ್ಮ ವರದಿಗಾರರನ್ನು ಹಾಗೂ ಛಾಯಾಚಿತ್ರಗಾರರನ್ನು ಅಕ್ಟೋಬರ್ ೨೧ ಶುಕ್ರವಾರ ಸಂಜೆ ೪.೩೦ಕ್ಕೆ ಕಳುಹಿಸಬೇಕಾಗಿ ವಿನಂತಿ.**

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು.